ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-1**

ಸಂಖ್ಯೆ:ಸಿ1(6)ವಿ.ವೃಂ.ವರ್ಗಾವಣೆ/2016-17 ದಿನಾಂಕ: 29-09-2016

**ಜ್ಞಾಪನ**

ವಿಷಯ:- ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್-ಬಿ ವೃಂದದ ವಿಷಯ ಪರಿವೀಕ್ಷಕರ(ವೃತ್ತಿ ಶಿಕ್ಷಣ)-ರವರ 2016-17ನೇ ಸಾಲಿನ ಘಟಕದ ಒಳಗಿನ ವರ್ಗಾವಣೆ ಬಗ್ಗೆ.

ಉಲ್ಲೇಖ:-1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 1 ಶಾಸನ 2007 ದಿ:01.09.2007.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 173 ಇಟಿಆರ್ 2007 ದಿ:15.10.2007.
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 37 ಇಟಿಆರ್ 2009 ದಿ:23.04.2011.
4. ಸರ್ಕಾರದ ಪತ್ರ ಸಂಖ್ಯೆ ಇಡಿ 06 ಪಿಬಿಎಸ್ 2016 ದಿನಾಂಕ:04-07-2016.
5. ಈ ಕಛೇರಿಯ ಅಧಿಕೃತ ಜ್ಞಾಪನ ಸಂಖ್ಯೆ:-ಸಿ1(6)ಸಾ.ವರ್ಗಾ.ದೈ.ಶಿ(ವಿಪ)ವೃ.ಶಿ(ವಿ.ಪ)/2016-17 ದಿನಾಂಕ:01-08-2016
6 ದಿನಾಂಕ:21-09-2016 ಮತ್ತು ದಿನಾಂಕ:22-09-2016ರಂದು ನಡೆದ ಸ್ಥಳ ಆಯ್ಕೆ ಪ್ರಕ್ರಿಯೆ.

-&&&-

**ಪ್ರಸ್ತಾವನೆ:-**

ಉಲ್ಲೇಖ(1)ರ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ 2007 ಜಾರಿಗೆ ಬಂದಿರುತ್ತದೆ. ಇದರ ಅನ್ವಯ ಉಲ್ಲೇಖ-2ರ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ 2007ನ್ನು ರೂಪಿಸಲಾಗಿದೆ. ಉಲ್ಲೇಖ(3)ರ ಸರ್ಕಾರದ ಅಧಿಸೂಚನೆಯಲ್ಲಿ ತಿದ್ದುಪಡಿ ನಿಯಮಗಳು 2011ನ್ನು ಹೊರಡಿಸಲಾಗಿದೆ. 2016-17ನೇ ಸಾಲಿನ ವರ್ಗಾವಣೆಗೆ ಸಂಬಂಧಿಸಿದಂತೆ ಉಲ್ಲೇಖ(4)ರ ಸರ್ಕಾರದ ನಿರ್ದೇಶನದಂತೆ ಉಲ್ಲೇಖ(5)ರಂತೆ ವರ್ಗಾವಣೆ ಬಗ್ಗೆ ಮಾರ್ಗಸೂಚಿ ಹಾಗೂ ವೇಳಾಪಟ್ಟಿಯನ್ನು ಹೊರಡಿಸಲಾಗಿದೆ. 2016-17ನೇ ಸಾಲಿನ ಘಟಕದ ಒಳಗಿನ ಕೋರಿಕೆ ವರ್ಗಾವಣೆಗೆ ಅರ್ಜಿ ಸಲ್ಲಿಸಿರುವ ಅಂತಿಮ ಆದ್ಯತಾ ಪಟ್ಟಿಯಲ್ಲಿನ ವಿಷಯ ಪರಿವೀಕ್ಷಕರು(ವೃತ್ತಿ ಶಿಕ್ಷಣ)-ರವರಿಗೆ ದಿನಾಂಕ:-22-09-2016ರಂದು ಗಣಕೀಕೃತ ಕೌನ್ಸಿಲಿಂಗ್ ಮೂಲಕ ಸ್ಥಳ ಆಯ್ಕೆ ಪ್ರಕ್ರಿಯೆ ನಡೆಸಲಾಗಿದೆ. ಉಲ್ಲೇಖ-6 ರನ್ವಯ ನಡೆದ ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಸಂಬಂಧಿಸಿದ ಅಧಿಕಾರಿಗಳು ಅವರ ಸ್ವಂತ ಇಚ್ಛೆಯಂತೆ ವರ್ಗಾವಣೆಗೊಳ್ಳಲು ಸ್ಥಳ ಆಯ್ಕೆ ಮಾಡಿಕೊಂಡಿರುತ್ತಾರೆ. ಅದರಂತೆ ಸ್ಥಳ ನಿಯುಕ್ತಿ ಆದೇಶವನ್ನು ಈ ಕೆಳಕಂಡಂತೆ ಹೊರಡಿಸಿದೆ.

**ಆದೇಶ:-**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕೆಳಕಂಡ ಗ್ರೂಪ್-ಬಿ ವೃಂದದ ವಿಷಯ ಪರಿವೀಕ್ಷಕರು(ವೃತ್ತಿ ಶಿಕ್ಷಣ)-ರವರಿಗೆ ಷರತ್ತಿಗೊಳಪಟ್ಟು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅವರ ಹೆಸರಿನ ಮುಂದೆ ಸೂಚಿಸಿರುವ ಹುದ್ದೆ ಮತ್ತು ಸ್ಥಳಗಳಿಗೆ ವರ್ಗಾಯಿಸಿ ಆದೇಶಿಸಿದೆ.

| ಕ್ರ. ಸಂ | ಅಧಿಕಾರಿಗಳ ಹೆಸರು, ಹುದ್ದೆ, ಮತ್ತು ವಿಳಾಸ | ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಸ್ಥಳ ಆಯ್ಕೆ ಮಾಡಿ ಕೊಂಡಂತೆ ವರ್ಗಾವಣೆ ಮಾಡಿರುವ ಹುದ್ದೆ/ ಸ್ಥಳ |
|---|---|---|
| 1 | ಶ್ರೀ ನರಸಿಂಹರೆಡ್ಡಿ .ಎ.ಎನ್., ವಿಷಯ ಪರಿವೀಕ್ಷಕರು(ವೃತ್ತಿ ಶಿಕ್ಷಣ), ಉಪನಿರ್ದೇಶಕರ ಕಛೇರಿ,ಸಾರ್ವಜನಿಕ ಶಿಕ್ಷಣ ಇಲಾಖೆ, ರಾಮನಗರ ಜಿಲ್ಲೆ ರಾಮನಗರ. | ವಿಷಯ ಪರಿವೀಕ್ಷಕರು(ವೃತ್ತಿ ಶಿಕ್ಷಣ), ಉಪನಿರ್ದೇಶಕರ ಕಛೇರಿ,ಸಾರ್ವಜನಿಕ ಶಿಕ್ಷಣ ಇಲಾಖೆ, ಕೋಲಾರ ಜಿಲ್ಲೆ ಕೋಲಾರ. |
| 2 | ಶ್ರೀ ಲಕ್ಷ್ಮಣ ತಿಮ್ಮಪ್ಪ ಬೇಗಾರ,ವಿಷಯ ಪರಿವೀಕ್ಷಕರು(ವೃತ್ತಿ ಶಿಕ್ಷಣ),ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ. | ವಿಷಯ ಪರಿವೀಕ್ಷಕರು(ವೃತ್ತಿ ಶಿಕ್ಷಣ), ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ದಾವಣಗೆರೆ ಜಿಲ್ಲೆ, ದಾವಣಗೆರೆ. |

ಷರತ್ತುಗಳು:-

[1] ಕೋರಿಕೆ ವರ್ಗಾವಣೆಯಾಗಿರುವುದರಿಂದ ವರ್ಗಾವಣೆಗೊಂಡ ಅಧಿಕಾರಿಗಳು ಯಾವುದೇ ರೀತಿಯ ವರ್ಗಾವಣೆ ಭತ್ಯೆ ಹಾಗೂ ಸೇರುವಿಕೆ ಕಾಲಕ್ಕೆ ಅರ್ಹರಿರುವುದಿಲ್ಲ.

[2] ಅಧಿಕಾರಿಗಳ ಕೋರಿಕೆ ಮೇರೆಗೆ ವರ್ಗಾವಣೆಗೆ ಅವಕಾಶ ನೀಡಿ ಗಣಕೀಕೃತ ಕೌನ್ಸಿಲಿಂಗ್ ಮೂಲಕ ಸ್ಥಳನಿಯುಕ್ತಿ ಮಾಡಲಾಗಿದ್ದು, ಯಾವುದೇ ಸ್ಥಳ ಮಾರ್ಪಾಡಿಗೆ ಅವಕಾಶವಿರುವುದಿಲ್ಲ.

[3] ವರ್ಗಾವಣೆ ಹೊಂದಿರುವ ಅಧಿಕಾರಿಗಳು ಕರ್ತವ್ಯದಿಂದ ಬಿಡುಗಡೆ ಹೊಂದುವ ಪೂರ್ವದಲ್ಲಿ ಸಂಬಂಧಿಸಿದ ನಿಯಂತ್ರಣಾಧಿಕಾರಿಗಳು/ಉಪನಿದೇಶಕರು (ಆಡಳಿತ) ರವರ ಅನುಮತಿ ಪಡೆದು ಬಿಡುಗಡೆ ಹೊಂದಲು ತಿಳಿಸಿದೆ.

[4] ಸಂಬಂಧಿಸಿದ ನಿಯಂತ್ರಣಾಧಿಕಾರಿಗಳು ವರ್ಗಾವಣೆಗೊಂಡ ಅಧಿಕಾರಿಗಳ ಸೇವಾ ವಿವರಗಳನ್ನು ಪರಿಶೀಲಿಸಿ ನಂತರವೇ ಕರ್ತವ್ಯದಿಂದ ಬಿಡುಗಡೆಗೊಳಿಸತಕ್ಕದ್ದು.

[5] ವರ್ಗಾವಣೆ ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿದ್ದಲ್ಲಿ ಅಂತಹ ಅಧಿಕಾರಿಯನ್ನೇ ಪೂರ್ಣ ಜವಾಬ್ದಾರರನ್ನಾಗಿ ಪರಿಗಣಿಸಿ, ತಪ್ಪು ಮಾಹಿತಿ ನೀಡಿದ ಕಾರಣಕ್ಕಾಗಿ ಅವರ ಮೇಲೆ ಸೂಕ್ತ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು.

[6] ವರ್ಗಾವಣೆ ಹೊಂದಿರುವ ಅಧಿಕಾರಿಗಳು ಕರ್ತವ್ಯದಿಂದ ಬಿಡುಗಡೆ ಹೊಂದಿದ ಹಾಗೂ ಕರ್ತವ್ಯಕ್ಕೆ ಹಾಜರಾದ ಬಗ್ಗೆ ಕೂಡಲೇ ಈ ಕಛೇರಿಗೆ ಮತ್ತು ಸಂಬಂಧಿಸಿದ ಎಲ್ಲಾ ಮೇಲಾಧಿಕಾರಿಗಳಿಗೆ ವರದಿ ಮಾಡುವುದು.

[ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ]

[ಎಸ್.ಕಾತ್ಯಾಯನಿ ದೇವಿ]
ಜಂಟಿ ನಿರ್ದೇಶಕರು(ಆಡಳಿತ)
29/09/2016
29.9.16

ಇವರಿಗೆ:-

[1] ಶ್ರೀ ನರಸಿಂಹರೆಡ್ಡಿ .ಎ.ಎನ್.,ವಿಷಯ ಪರಿವೀಕ್ಷಕರು(ವೃತ್ತಿ ಶಿಕ್ಷಣ), ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ ರಾಮನಗರ ಜಿಲ್ಲೆ ರಾಮನಗರ.

[2] ಶ್ರೀ ಲಕ್ಷ್ಮಣ ತಿಮ್ಮಪ್ಪ ಬೇಗಾರ, ವಿಷಯ ಪರಿವೀಕ್ಷಕರು(ವೃತ್ತಿ ಶಿಕ್ಷಣ),ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಪ್ರತಿಯನ್ನು:-

[1] ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಶಿಕ್ಷಣ ಇಲಾಖೆ ಬಹುಮಹಡಿ ಕಟ್ಟಡ, ಬೆಂಗಳೂರು-ರವರಿಗೆ ಕಳುಹಿಸಿದೆ.

(2) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು-ರವರಿಗೆ ಕಳುಹಿಸಿದೆ.

(3) ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು, ಕೋಲಾರ ಜಿಲ್ಲೆ/ದಾವಣಗೆರೆ ಜಿಲ್ಲೆ-ರವರಿಗೆ ಕಳುಹಿಸಿದೆ.

[4] ಜಿಲ್ಲಾ ಉಪ ನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ಕೋಲಾರ ಜಿಲ್ಲೆ/ದಾವಣಗೆರೆ ಜಿಲ್ಲೆ.-ರವರಿಗೆ ಕಳುಹಿಸಿದೆ.

[5] ಕಛೇರಿ ಪ್ರತಿ.